**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 16 ಟಿಎಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿ: 10.6.2020

**ಸುತ್ತೋಲೆ**

ಕರ್ನಾಟಕ ರಾಜ್ಯದಲ್ಲಿ ಕೊರೋನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯಾದ್ಯಂತ ದಿ:24.3.2020 ರಿಂದ ಲಾಕ್‌ಡೌನ್ ಜಾರಿ ಮಾಡಲಾಗಿತ್ತು. ಇದರಿಂದ ಅತ್ಯಗತ್ಯ ಸೇವೆಗಳನ್ನು ಸಲ್ಲಿಸುತ್ತಿರುವ ಇಲಾಖೆಗಳು ಮಾತ್ರ ಕೆಲಸ ನಿರ್ವಹಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸುತ್ತೋಲೆ ಹೊರಡಿಸಿತ್ತು. ಆದರೆ ಎಲ್ಲಾ ಇಲಾಖೆಗಳ ಸರ್ಕಾರಿ ನೌಕರರು, ಗುತ್ತಿಗೆ ನೌಕರರು ಸಾರಿಗೆ ವ್ಯವಸ್ಥೆಯಿಲ್ಲದ ಕಾರಣ ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಕಚೇರಿ ಕೆಲಸಕ್ಕೆ ಬರಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಕೆಲವು ಇಲಾಖೆಗಳಲ್ಲಿ ಗುತ್ತಿಗೆ/ಹೊರಗುತ್ತಿಗೆ ನೌಕರರಿಗೆ ಗೈರು ಹಾಜರಿ ಅವಧಿಯಲ್ಲಿ ವೇತನ ಪಾವತಿಸಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೆ, ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: 40-3/2020-ಡಿಎಂ೦ಐ(ಎ) ದಿ: 17.5.2020ರನ್ವಯ ಗೈರು ಹಾಜರಾದ ಅವಧಿಯಲ್ಲಿ ಯಾವುದೇ ನೌಕರರ ವೇತನವನ್ನು ತಡೆ ಹಿಡಿಯದೇ ಪಾವತಿಸುವಂತೆ ನಿರ್ದೇಶಿಸಿರುತ್ತಾರೆ.

ಮುಂದುವರೆದು, ಸಿಆಸು ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020(ಭಾಗ), ದಿನಾಂಕ: 18.5.2020 ರಲ್ಲಿ ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಲಾಕ್‌ಡೌನ್‌ನ್ನು ಸಡಿಲಿಸಿ ದಿ:19.5.2020 ರಿಂದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸ್ವಾಯತ್ತ ಸಂಸ್ಥೆ, ನಿಗಮ, ಮಂಡಳಿ ಕಚೇರಿಗಳಲ್ಲಿ ಶೇ.100ರಷ್ಟು ಗ್ರೂಪ್ ಎ,ಬಿ,ಸಿ, ಮತ್ತು ಡಿ ವೃಂದದ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಸೂಚಿಸಿರುತ್ತಾರೆ.

ಆದ್ದರಿಂದ, ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸ್ವಾಯತ್ತ ಸಂಸ್ಥೆ, ನಿಗಮ, ಮಂಡಳಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ/ ಹೊರಗುತ್ತಿಗೆ / ದಿನಗೂಲಿ ನೌಕರರಿಗೆ ಲಾಕ್ ಡೌನ್ ಅವಧಿ ಅಂದರೆ ದಿ: ದಿ:24.3.2020 ದಿ:18.5.2020 ರವರೆಗೆ ರಜೆ ತೆಗೆದುಕೊಂಡಿರುವ ಅವಧಿಯನ್ನು ಹೊರತುಪಡಿಸಿ, ಉಳಿದ ಅವಧಿಗೆ ವೇತನ / ದಿನಗೂಲಿಯನ್ನು ಪಾವತಿಸುವಂತೆ ತಮ್ಮ ಅಧೀನದ ಇಲಾಖೆ, ನಿಗಮ,ಮಂಡಳಿ ಮುಂತಾದವುಗಳಿಗೆ ಸೂಚಿಸಲು ತಿಳಿಸಲಾಗಿದೆ.

10/6/2020
(ಹೆಚ್.ಎ.ಶೋಭ)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ:

1. ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2. ಆಯುಕರು, ಖಜಾನೆ ಇಲಾಖೆ.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
5. ಶಾಖಾ ರಕ್ಷಕ ಕಡತ